**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ., ಚನ್ನರಾಯಪಟ್ಟಣ**

**ಸಿಸಿ ಸಂಖ್ಯೆಃ 872/2024**

**ಪಿರ್ಯಾದಿದಾರರುಃ** ರಾಜ್ಯ ಪರ ಪೊಲೀಸರು,
ಚನ್ನರಾಯಪಟ್ಟಣ ನಗರ ಪೋಲೀಸ್ ಠಾಣೆ

**ವಿರುದ್ದ**

**ಆರೋಪಿತರುಃ**
1. **ಮಂಜುಳಾ** ಕೋಂ ಶಿವಲಿಂಗೇಗೌಡ ಉಃ ಗುಂಡ
2. ಶಿವಲಿಂಗೇಗೌಡ ಉಃ ಗುಂಡ ಬಿನ್ ಪುಟ್ಟೇಗೌಡ

**ಆಪಾದನೆ**

**ಶ್ರೀಮತಿ ಕುಸುಮ ವಿ.**, ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ. ಚನ್ನರಾಯಪಟ್ಟಣ ಆದ ನಾನು ಆರೋಪಿಗಳಾದ ನಿಮ್ಮ ಮೇಲೆ ಹೊರಿಸುವ ಆಪಾದನೆ ಏನೆಂದರೆ,

ದಿನಾಂಕಃ 20.06.2023 ರಂದು ಸುಮಾರು 5.45 ಗಂಟೆ ಸಮಯದಲ್ಲಿ, ಚನ್ನರಾಯಪಟ್ಟಣ ನಗರ ಪೋಲೀಸ್ ಠಾಣಾ ಸರಹದ್ದಿಗೆ ಸೇರಿದ, ಮಹಾಲಕ್ಷ್ಮಿ ಲೇಔಟ್ ನಲ್ಲಿ 1 ಮತ್ತು 2 ನೇ ಆರೋಪಿತರಾದ ನೀವು ಸಮಾನ ಉದ್ದೇಶದಿಂದ ಸಾಕ್ಷಿ.2 ರವರು ಗಿಡವನ್ನು ಕಿತ್ತುಹಾಕಿದ ವಿಚಾರಕ್ಕೆ ಜಗಳ ತೆಗೆದು, ಆರೋಪಿತರಾದ ನೀವು ಸಾಕ್ಷಿ.2 ರವರನ್ನು ಕುರಿತು, ಅವರು ಕುಪಿತರಾಗಿ ಶಾಂತಿಭಂಗವನ್ನುಂಟುಮಾಡಲಿ ಎಂಬ ಉದ್ದೇಶದಿಂದ, ಸಾಕ್ಷಿ.2 ರವರಿಗೆ ಕಿತ್ತೋದ ಮುಂಡೆ ಎಂದು ಅವಾಚ್ಯ ಶಬ್ದಗಳಿಂದ ಬೈದು, ಆ ಮೂಲಕ ಆರೋಪಿಗಳಾದ ನೀವು **ಭಾರತೀಯ ದಂಡ ಸಂಹಿತೆ ಕಲಂಃ 504 ಸಹವಾಚಕ 34** ರಡಿಯಲ್ಲಿ ದಂಡನೀಯವಾದ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಬರುವಂತೆ ಎಸಗಿರುತ್ತೀರಿ.

**2)** ಅದೇ ದಿನ, ಅದೇ ಸ್ಥಳ, ಅದೇ ಸಮಯದಲ್ಲಿ 1 ನೇ ಆರೋಪಿಯಾದ ನೀವು ಸಮಾನ ಉದ್ದೇಶವನ್ನು ಹೊಂದಿ, ನಿಮ್ಮ ಸ್ವ ಇಚ್ಛೆಯಿಂದ ಸಾಕ್ಷಿ.2 ರವರ ಬಲಕಪಾಳಕ್ಕೆ, ಹಾಗೂ ಸಾಕ್ಷಿ.1 ರವರ ತಲೆಯನ್ನು ಕೂದಲನ್ನು ಹಿಡಿದು ಗುಂಜಾಡಿ ನಂತರ 2 ನೇ ಅರೋಪಿಯಾದ ನೀವು ಸಾಕ್ಷಿ.1 ರವರ ಕೈಗೆ ನಿಮ್ಮ ಕೈಗಳಿಂದ

ಹೊಡೆದು ನೊವುಂಟು ಮಾಡಿ ಸಾಮಾನ್ಯ ಸ್ವರೂಪದ ಗಾಯಪಡಿಸಿ, ಆ ಮೂಲಕ ಆರೋಪಿಗಳಾದ ನೀವು **ಭಾರತೀಯ ದಂಡ ಸಂಹಿತೆ ಕಲಂಃ 323 ಸಹವಾಚಕ 34** ರಡಿಯಲ್ಲಿ ದಂಡನೀಯವಾದ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಬರುವಂತೆ ಎಸಗಿರುತ್ತೀರಿ.

**3)** ಅದೇ ದಿನ, ಅದೇ ಸ್ಥಳ, ಅದೇ ಸಮಯದಲ್ಲಿಆರೋಪಿತರಾದ ನೀವು ಸಮಾನ ಉದ್ದೇಶವನ್ನು ಹೊಂದಿ, ಸಾಕ್ಷಿ.1 ಮತ್ತು 2 ರವರಿಗೆ ಕೊಲೆ ಬೆದರಿಕೆ ಹಾಕಿ ಅಪರಾಧಿಕ ಭಯೋತ್ಪಾದನೆ ಉಂಟು ಮಾಡಿ, ಆ ಮೂಲಕ ಆರೋಪಿಗಳಾದ ನೀವು **ಭಾರತೀಯ ದಂಡ ಸಂಹಿತೆ ಕಲಂಃ 506 ಸಹವಾಚಕ 34** ರಡಿಯಲ್ಲಿ ದಂಡನೀಯವಾದ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಬರುವಂತೆ ಎಸಗಿರುತ್ತೀರಿ.

**ಪ್ರಶ್ನೆಃ** 1. ಈಗ ನಿಮಗೆ ಓದಿ ಹೇಳಲಾದ ನಿಮ್ಮ ಮೇಲಿನ ಆಪಾದನೆ ನಿಮಗೆ ತಿಳಿಯಿತೆ?

1 ನೇ ಆರೋಪಿಯ ಉತ್ತರಃ

2 ನೇ ಆರೋಪಿಯ ಉತ್ತರಃ

**ಪ್ರಶ್ನೆಃ** 2. ನೀವು ನಿಮ್ಮ ತಪ್ಪನ್ನು ಒಪ್ಪಿಕೊಳ್ಳುವಿರಾ ಅಥವಾ ವಿಚಾರಣೆ ನಡೆಯಲೆಂದು ಬಯಸುತ್ತೀರಾ?

1 ನೇ ಆರೋಪಿಯ ಉತ್ತರಃ

2 ನೇ ಆರೋಪಿಯ ಉತ್ತರಃ

(ಈ ಆಪಾದನೆಯನ್ನು ತೆರೆದ ನ್ಯಾಯಾಲಯದಲ್ಲಿ ಆರೋಪಿ/ಗಳಿಗೆ ತಿಳಿದಿರುವ ಭಾಷೆಯಲ್ಲಿ ಓದಿ ಹೇಳಿ ಕೇಳಲಾಗಿ ಆರೋಪಿ/ಗಳು ನೀಡಿರುವ ಉತ್ತರಗಳನ್ನು ಪಡೆದುಕೊಂಡಿದ್ದು ಅವು ಸರಿ ಇವೆ ಎಂದು ದೃಢೀಕರಿಸಲಾಯಿತು)

ದಿನಾಂಕಃ **02.08.2025**

(ಶ್ರೀಮತಿ ಕುಸುಮ ಎ.)
ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ., ಚನ್ನರಾಯಪಟ್ಟಣ.